ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ - ಸದನ ಸಮಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ವಾಣಿ

ದಿನಾಂಕ : DATE : 20/1/2021

# ಮೂವರು ಎಂಎಲ್ಸಿಗಳಿಗೆ ನೋಟಿಸ್

**ಬೆಂಗಳೂರು:** ವಿಧಾನಪರಿಷತ್‌ನಲ್ಲಿ ಡಿ.15ರಂದು ನಡೆದ ಘಟನೆಯ ಬಗ್ಗೆ ತನಿಖೆ ನಡೆಸುತ್ತಿರುವ ಸದನ ಸಮಿತಿ ಮೂವರು ವಿಧಾನಪರಿಷತ್ ಸದಸ್ಯರಿಗೆ ನೋಟಿಸ್ ಜಾರಿ ಮಾಡಿದೆ. ಸಭಾಪತಿ ಕುರ್ಚಿಯಲ್ಲಿ ಉಪಸಭಾಪತಿ ಧರ್ಮೇಗೌಡ ಕುಳಿತ ಸಂದರ್ಭ ನಡೆದ ಘಟನಾವಳಿಗಳಲ್ಲಿ ಮೇಲ್ನೋಟಕ್ಕೆ ಕೆಲ ಶಾಸಕರು ಪಾತ್ರದಾರಿಗಳಾಗಿದ್ದರು ಎನ್ನುವುದು ಸಮಿತಿಗೆ ಮನದಟ್ಟಾಗಿದೆ. ಈ ಹಿನ್ನೆಲೆಯಲ್ಲಿ ಸದಸ್ಯರಾದ ವೈ.ಎನ್.ನಾರಾಯಣಸ್ವಾಮಿ, ಪುಟ್ಟಣ್ಣ ಮತ್ತು ಪಿ.ಆರ್.ರಮೇಶ್ ಅವರಿಗೆ ನೋಟಿಸ್ ಜಾರಿ ಮಾಡಿ, ಸದನ ಸಮಿತಿ ಮುಂದೆ ಹಾಜರಾಗುವಂತೆ ತಿಳಿಸಲಾಗಿದೆ. ನೋಟಿಸ್‌ಗೆ ಪ್ರತಿಕ್ರಿಯಿಸಿರುವ ವೈ.ಎ.ನಾರಾಯಣಸ್ವಾಮಿ, ನಾನು ಸಮಿತಿ ಮುಂದೆ ಹಾಜರಾಗುವುದಿಲ್ಲ ಎಂದು ತಿಳಿಸಿದ್ದಾರೆ. ಪುಟ್ಟಣ್ಣ ಮಾತ್ರ ನನಗೆ ಕಾಲಾವಕಾಶ ಬೇಕು ಎಂದು ಕೇಳಿಕೊಂಡಿದ್ದಾರೆ. ಪಿ.ಆರ್.ರಮೇಶ್ ಇನ್ನು ಯಾವ ಪ್ರತಿಕ್ರಿಯೆ ನೀಡಿಲ್ಲ ಎಂದು ಸದನ ಸಮಿತಿ ಮೂಲಗಳು ತಿಳಿಸಿವೆ.

**21ಕ್ಕೆ ಸಭೆ:** ಈಗಾಗಲೆ ಹಲವು ಸಭೆಗಳನ್ನು ನಡೆಸಿರುವ ಮರಿತಿಬ್ಬೇಗೌಡ ನೇತೃತ್ವದ ಸದನ ಸಮಿತಿ, ಜ.21ಕ್ಕೆ ಮತ್ತೊಂದು ಸಭೆ ನಡೆಸಲಿದೆ. ಇಲ್ಲಿ ವರದಿಗೆ ಬಹುತೇಕ ಅಂತಿಮ ರೂಪ ನೀಡುವ ನಿಟ್ಟಿನಲ್ಲಿ ಚರ್ಚೆಗಳು ನಡೆಯಲಿವೆ ಎಂದು ಮೂಲಗಳು ತಿಳಿಸಿವೆ.